ವಸತಿ ಗೃಹ ಸಂಖ್ಯೆ	ವಿಸ್ತೀರ್ಣ (ನಿವೇಶನ) ಚದರ ಅಡಿಯಲ್ಲಿ)
17:ಬಿ	4588.21
17:ಬಿ	4588.21
18	3576.54
14	4331.21
19: ಬಿ	1564.00
19: ಎ	1564.00
13: ಎ	1912.50
13: ಬಿ	1912.50
20: ಬಿ	1368.75
20: ಎ	1368.75

ಆ) ಲೋಕೋಪಯೋಗಿ ಇಲಾಖೆಯ ಉಪ ವಿಭಾಗ ಕಚೇರಿಯ ನಿವೇಶನದ ಒಟ್ಟು ವಿಸ್ತೀರ್ಣ 0 ಎಕರೆ 26.37 ಗುಂಟೆ ಇರುತ್ತದೆ.

ಇ) ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿರುವ ಜಮೀನಿನಲ್ಲಿ ಖಾಸಗಿಯವರು ಅಕ್ರಮ ಪ್ರವೇಶ ಮಾಡಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉದ್ಯಾನವನ ನಿರ್ಮಿಸುವುದು

1053 (1259) ಶ್ರೀ ಸುಭಾಷ ಆರ್. ಗುತ್ತೇದಾರ್ (ಆಳಂದ) : ಮಾನ್ಯ ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಳಂದ ತಾಲ್ಲೂಕಿನ ಅಮರ್ಜಾ ಅಣೆಕಟ್ಟು ಪ್ರದೇಶದಲ್ಲಿ ಉದ್ಯಾನವನ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ನಿರ್ಮಿಸಲಾಗುವುದು;

ಇ) ಹಾಗಿದ್ದಲ್ಲಿ, ಅಣೆಕಟ್ಟು ಕೆಳಭಾಗದಲ್ಲಿ ಸರ್ಕಾರಿ ಜಮೀನಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಉದ್ಯಾನವನ ನಿರ್ಮಿಸಲು ಸರ್ಕಾರ ಸ್ಥಳಪರಿಶೀಲನೆ ನಡೆಸಿದೆಯೇ;

ಉ) ಹಾಗಿದ್ದಲ್ಲಿ, ಉದ್ಯಾನವನ ನಿರ್ಮಿಸಲು ಸರ್ಕಾರ ಅನುದಾನವನ್ನು ನಿಗಧಿಪಡಿಸಿದೆಯೇ;

ಊ) ಹಾಗಿದ್ದಲ್ಲಿ, ಕಾಮಗಾರಿಯನ್ನು ಯಾವಾಗ ಪ್ರಾರಂಭಿಸ ಲಾಗುವುದು?

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು) :

ಅ) ಇಲ್ಲ.

ಆ) ಇ) ಈ) ಉ) ಮತ್ತು ಊ)

ಉದ್ಭವಿಸುವುದಿಲ್ಲ.

ಅನುಬಂಧ – I

ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕ, 2010

(2010ರ ವಿಧಾನಸಭೆಯ ವಿಧೇಯಕ ಸಂಖ್ಯೆ 14)

ಕರ್ನಾಟಕ ಭೂ ಸುಧಾರಣೆಗಳ ಅಧಿನಿಯಮ, 1961ನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕಾಗಿ ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಭೂ ಸುಧಾರಣೆಗಳ ಅಧಿನಿಯಮ, 1961ನ್ನು (1962ರ ಕರ್ನಾಟಕ ಅಧಿನಿಯಮ 10) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರು ವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯ ಮಿತವಾಗಲಿ:–

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.– (1) ಈ ಅಧಿನಿಯಮವನ್ನು ***ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ಅಧಿನಿಯಮ, 2010*** ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.